# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** 'ಹಳ್ಳಿ ಸಂತೆ' ಯೋಜನೆಯಡಿ ಮಾರುಕಟ್ಟೆ ನಿರ್ಮಾಣ ಮಾಡಲು ಮಂಜೂರು ಮಾಡುವ ಬಗ್ಗೆ.

**ಓದಲಾಗಿದೆ:**

1) 2016–17 ನೇ ಸಾಲಿನ ಆಯವ್ಯಯ ಘೋಷಣೆಯ ಕ್ರಮ ಸಂಖ್ಯೆ 278
2) ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 389 ಗ್ರಾಪಂಅ 2016(ಭಾಗ–3), ಬೆಂಗಳೂರು, ದಿನಾಂಕ 20.01.2017.
3) ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 879 ಗ್ರಾಪಂಅ 2017, ಬೆಂಗಳೂರು, ದಿನಾಂಕ 07.12.2017.
4) ಶ್ರೀ ಜೆ.ಟಿ. ಪಾಟೀಲ, ಶಾಸಕರು, ಬೀಳಗಿ ವಿಧಾನಸಭಾ ಕ್ಷೇತ್ರ, ಬಾಗಲಕೋಟೆ ಜಿಲ್ಲೆ ಇವರ ಪತ್ರ ದಿನಾಂಕ 06.03.2018.

***

ಮೇಲೆ ಓದಲಾದ (1) ರಲ್ಲಿ 500 ದೊಡ್ಡ ಗ್ರಾಮ ಪಂಚಾಯತಿಗಳಲ್ಲಿ 'ಹಳ್ಳಿ ಸಂತೆ' ಏರ್ಪಡಿಸಲು ವಿಲೇಜ್ ಹಾತ್ ಮಾದರಿಯಲ್ಲಿ ರೂ. 25 ಕೋಟಿಗಳ ಅಂದಾಜು ಮೊತ್ತದಲ್ಲಿ ಮಾರುಕಟ್ಟೆಗಳನ್ನು ನಿರ್ಮಿಸಲು ಹಾಗೂ ಮೂಲಭೂತ ಸೌಲಭ್ಯಗಳನ್ನು ಒದಗಿಸಲು ಅವಕಾಶ ಕಲ್ಪಿಸಲಾಗಿದೆ.

ಮೇಲೆ ಓದಲಾದ (2) ರಲ್ಲಿ 'ಹಳ್ಳಿ ಸಂತೆ' ಯೋಜನೆಯಡಿ ಮಾರುಕಟ್ಟೆಗಳನ್ನು ನಿರ್ಮಿಸಲು ಮಂಜೂರಾತಿ ನೀಡಲಾಗಿದ್ದು, ಅನುಷ್ಠಾನ ಏಜೆನ್ಸಿಯಾಗಿ ಕರ್ನಾಟಕ ರಾಜ್ಯ ಗ್ರಾಮೀಣ ಮೂಲಸೌಕರ್ಯ ಅಭಿವೃದ್ಧಿ ಸಂಸ್ಥೆ(ಕೆ.ಆರ್.ಐ.ಡಿ.ಎಲ್.), ಬೆಂಗಳೂರು ಇವರನ್ನು ಆಯ್ಕೆ ಮಾಡಲಾಗಿದೆ. ಹಾಗೂ ಬಾಗಲಕೋಟೆ ಜಿಲ್ಲೆ ಬದಾಮಿ ತಾಲ್ಲೂಕು ಅನವಾಲ ಗ್ರಾಮವನ್ನು ಹಳ್ಳಿ ಸಂತೆ ಯೋಜನೆಯಡಿ ಮಾರುಕಟ್ಟೆ ನಿರ್ಮಾಣ ಮಾಡಲು ಆಯ್ಕೆ ಮಾಡಲಾಗಿತ್ತು.

ಮೇಲೆ ಓದಲಾದ (3) ರಲ್ಲಿ 'ಹಳ್ಳಿ ಸಂತೆ' ಯೋಜನೆಯಡಿ ಮಾರುಕಟ್ಟೆ ಕಟ್ಟಡ ಹಾಗೂ ಪ್ರಾಂಗಣವನ್ನು ನಿರ್ಮಿಸಲು ಬಾಗಲಕೋಟೆ ಜಿಲ್ಲೆ ಬೀಳಗಿ ತಾಲ್ಲೂಕು ಗಿರಿಸಾಗರ ಹಾಗೂ ತೆಗ್ಗಿ ಗ್ರಾಮಗಳನ್ನು ಆಯ್ಕೆ ಮಾಡಲಾಗಿತ್ತು.

ಮೇಲೆ ಓದಲಾದ (4) ರಲ್ಲಿ ಶ್ರೀ ಜೆ.ಟಿ. ಪಾಟೀಲ, ಶಾಸಕರು, ಬೀಳಗಿ ವಿಧಾನಸಭಾ ಕ್ಷೇತ್ರ, ಬಾಗಲಕೋಟೆ ಜಿಲ್ಲೆ ಇವರು ಬೀಳಗಿ ಮತಕ್ಷೇತ್ರ ವ್ಯಾಪ್ತಿಯಲ್ಲಿ ಹಳ್ಳಿ ಸಂತೆ ಯೋಜನೆಯಡಿ ಆಯ್ಕೆಯಾಗಿರುವ ಗ್ರಾಮಗಳಿಗೆ ಕೆಆರ್‌ಐಡಿಎಲ್ ಸಂಸ್ಥೆಯ ಬದಲು ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ಬಾಗಲಕೋಟೆ ರವರ ಮುಖಾಂತರ ಹಳ್ಳಿ ಸಂತೆ ಯೋಜನೆಯಡಿ ಮಾರುಕಟ್ಟೆ ನಿರ್ಮಾಣ ಮಾಡಲು ಅನುಷ್ಠಾನ ಏಜನ್ಸಿಯಾಗಿ ಆಯ್ಕೆ ಮಾಡಲು ಕೋರಿದ್ದಾರೆ.

ಬಾಗಲಕೋಟೆ ಜಿಲ್ಲೆ ಬದಾಮಿ ತಾಲ್ಲೂಕಿನ ಅನವಾಲ, ಬೀಳಗಿ ತಾಲ್ಲೂಕಿನ ತೆಗ್ಗಿ ಹಾಗೂ ಗಿರಿಸಾಗರ ಗ್ರಾಮಗಳಲ್ಲಿ ಹಳ್ಳಿ ಸಂತೆ ಯೋಜನೆಯಡಿ ಮಾರುಕಟ್ಟೆ ನಿರ್ಮಾಣ ಮಾಡಲು ಕೆಆರ್‌ಐಡಿಎಲ್ ಸಂಸ್ಥೆ, ಬೆಂಗಳೂರು ಬದಲು ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ಬಾಗಲಕೋಟೆ ಇವರನ್ನು ಅನುಷ್ಠಾನ ಏಜನ್ಸಿಯಾಗಿ ಆಯ್ಕೆ ಮಾಡಲು ನಿರ್ಧರಿಸಿದೆ. ಅದರಂತೆ ಈ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 285 ಗ್ರಾಪಂಅ 2018, ಬೆಂಗಳೂರು, ದಿನಾಂಕ: 26.03.2018**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಈ ಕೆಳಕಂಡ ಗ್ರಾಮಗಳಲ್ಲಿ 'ಹಳ್ಳಿ ಸಂತೆ' ಯೋಜನೆಯಡಿ ಮಾರುಕಟ್ಟೆ ನಿರ್ಮಾಣ ಮಾಡಲು ಕೆಆರ್‌ಐಡಿಎಲ್ ಸಂಸ್ಥೆ, ಬೆಂಗಳೂರು ಬದಲು ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ಬಾಗಲಕೋಟೆ ಇವರನ್ನು ಅನುಷ್ಠಾನ ಏಜನ್ಸಿಯಾಗಿ ಆಯ್ಕೆ ಮಾಡಿ ಮಂಜೂರಾತಿ ನೀಡಿದೆ.

| ಕ್ರ. ಸಂ. | ಜಿಲ್ಲೆ | ತಾಲ್ಲೂಕು | ಗ್ರಾಮ |
|---|---|---|---|
| 01 | ಬಾಗಲಕೋಟೆ | ಬೀಳಗಿ | ತೆಗ್ಗಿ |
| 02 | ಬಾಗಲಕೋಟೆ | ಬೀಳಗಿ | ಗಿರಿಸಾಗರ |
| 03 | ಬಾಗಲಕೋಟೆ | ಬದಾಮಿ | ಅನವಾಲ |

ಸದರಿ ಯೋಜನೆಯ ಬಗ್ಗೆ ದಿನಾಂಕ 06.07.2016 ರಲ್ಲಿ ಹೊರಡಿಸಿರುವ ಮಾರ್ಗಸೂಚಿಗಳನ್ವಯ ಅನುಷ್ಠಾನಗೊಳಿಸಲು ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ಬಾಗಲಕೋಟೆ ಇವರಿಗೆ ಸೂಚಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

21/3
**(ಮುಬಾರಕ್ ಅಹ್ಮದ್)**
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

**ಇವರಿಗೆ:**

1) ಮಹಾಲೇಖಪಾಲರು, ಕರ್ನಾಟಕ ವೃತ್ತ, ಬೆಂಗಳೂರು.
2) ನಿರ್ದೇಶಕರು, ರಾಜ್ಯ ಹುಜೂರ್ ಖಜಾನೆ, ಬೆಂಗಳೂರು.
3) ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ರಾಜ್ಯ ಗ್ರಾಮೀಣ ಮೂಲಸೌಕರ್ಯ ಅಭಿವೃದ್ಧಿ ಸಂಸ್ಥೆ(ಕೆ.ಆರ್.ಐ.ಡಿ.ಎಲ್.), ಬೆಂಗಳೂರು.
4) ಆಯುಕ್ತರು, ಗ್ರಾಮೀಣಾಭಿವೃದ್ಧಿ ಆಯುಕ್ತಾಲಯ, ಗ್ರಾ.ಅ. ಮತ್ತು ಪಂ.ರಾಜ್ ಇಲಾಖೆ.
5) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತಿ, ಗದಗ
6) ನಿರ್ದೇಶಕರು(ಪಂ.ರಾಜ್-2), ಗ್ರಾ.ಅ. ಮತ್ತು ಪಂ.ರಾಜ್ ಇಲಾಖೆ.
7) ನಿರ್ದೇಶಕರು(ಗ್ರಾ.ಮೂ.ಸೌ.), ಗ್ರಾ.ಅ. ಮತ್ತು ಪಂ.ರಾಜ್ ಇಲಾಖೆ
8) ಅಧೀನ ಕಾರ್ಯದರ್ಶಿ(ಪ್ರ), ಆರ್ಥಿಕ ಇಲಾಖೆ, ವೆಚ್ಚ-5, ವಿಧಾನ ಸೌಧ, ಬೆಂಗಳೂರು.
9)ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾ.ಅ. ಮತ್ತು ಪಂ.ರಾಜ್ ಇಲಾಖೆ.
10)ನಿರ್ದೇಶಕರು(ಯೋ.ಉ.ಮಾ.), ಗ್ರಾ.ಅ. ಮತ್ತು ಪಂ.ರಾಜ್ ಇಲಾಖೆ.
11)ನಿರ್ದೇಶಕರು, ಎ.ಎನ್.ಎಸ್.ಎಸ್.ಐ.ಆರ್.ಡಿ., ಮೈಸೂರು.
12)ಕಾರ್ಯಪಾಲಕ ಅಭಿಯಂತರರು, ಬಾಗಲಕೋಟೆ ಜಿಲ್ಲಾ ಪಂಚಾಯತಿ.
13)ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ, ಬದಾಮಿ.
14)ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ, ಬೀಳಗಿ.
13)ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಅನವಾಲ, ತೆಗ್ಗಿ ಹಾಗೂ ಗಿರಿಸಾಗರ ಗ್ರಾಮ ಪಂಚಾಯತಿ.
14)ಸಂಪಾದಕರು, ಕರ್ನಾಟಕ ವಿಕಾಸ – ಪ್ರಕಟಣೆಗಾಗಿ.
15)ಗಣಕಕೋಶ – ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು.
16)ಹೆಚ್ಚುವರಿ ಪ್ರತಿ/ಶಾಖಾ ರಕ್ಷಕ ಕಡತ.

**ಪ್ರತಿಯನ್ನು ಮಾಹಿತಿಗಾಗಿ:**

1)ಮಾನ್ಯ ಗ್ರಾ.ಅ. ಮತ್ತು ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ.
2)ಪ್ರಧಾನ ಕಾರ್ಯದರ್ಶಿಗಳು(ಪಂ.ರಾಜ್), ಗ್ರಾ.ಅ. & ಪಂ.ರಾಜ್ ಇಲಾಖೆ ರವರ ಆಪ್ತ ಕಾರ್ಯದರ್ಶಿ, ಬಹುಮಹಡಿಗಳ ಕಟ್ಟಡ, ಬೆಂಗಳೂರು.